**ಪ್ರಧಾನ ಸಿವಿಲ್ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೆಗ್ಗಡದೇವನಕೋಟೆ, ಮೈಸೂರು ಜಿಲ್ಲೆ.**

**O.S. No. 107/2021**

**ಸಾಕ್ಷಿಯನ್ನು ದಿನಾಂಕಃ 09.10.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಪ್ರತಿವಾದಿಗಳ ಪರ ಶ್ರೀ. ಬಿ.ಎಸ್.ಎಸ್. ವಕೀಲರಿಂದಃ**

ಈ ದಾವೆಯಲ್ಲಿ ನಾನು 4 ನೇ ಪ್ರತಿವಾದಿಯಾಗಿರುತ್ತೇನೆ. ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರ ಸಲ್ಲಿಸಿದ್ದು, ಸದರಿ ಪ್ರಮಾಣ ಪತ್ರದಲ್ಲಿರುವ ಅಂಶಗಳನ್ನು ನಾನೇ ಖುದ್ದಾಗಿ ಬರೆಸಿರುತ್ತೇನೆ ಹಾಗೂ ಅದರಲ್ಲಿರುವ ಅಂಶಗಳು ಸತ್ಯವೆಂದು ಪ್ರಮಾಣಿಕರಿಸುತ್ತೇನೆ. ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ.

ನನ್ನ ಮಧ್ಯಂತರ ಅರ್ಜಿಯ ಜೊತೆ ಕೆಲವು ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ.

ಅಸಲು ದಾವೆ ಸಂಖ್ಯೆ 383/2022 ರಲ್ಲಿನ ವಾದ ಪತ್ರ, ಪ್ರತಿವಾದ ಪತ್ರ ಹಾಗು ಫ್ರಾಸಾ-1 ರವರ ಸಾಕ್ಷ್ಯದ ಧೃಡೀಕೃತ ನಕಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ **ನಿ.ಡಿ.-1 ರಿಂದ ನಿ.ಡಿ.-3** ಎಂದು, ವಿಶೇಷ ಮುಖ್ತ್ಯಾರ್ ನಾಮೆಯ ಧೃಡೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು **ನಿ.ಡಿ.-4** ಎಂದು, ಮಂಜೂರಾತಿ ಪತ್ರದ ಧೃಡೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು **ನಿ.ಡಿ.-5** ಎಂದು, ದಿನಾಂಕಃ 07.12.1976 ರ ನೋಂದಾಯಿತ ವಿಭಾಗ ಪತ್ರದ ಧೃಡೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು **ನಿ.ಡಿ.-6** ಎಂದು, 16 ಪಹಣಿ ಪತ್ರಿಕೆಗಳ ಧೃಡೀಕೃತ ನಕಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ **ನಿ.ಡಿ.-7 ರಿಂದ ನಿ.ಡಿ.-22** ಎಂದು, 06 ಕಂದಾಯ ರಸೀದಿಗಳ ಧೃಡೀಕೃತ ನಕಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ **ನಿ.ಡಿ.-23 ರಿಂದ ನಿ.ಡಿ.-28** ಎಂದು, 02 ಮ್ಯುಟೇಷನ್ ರಿಜಿಸ್ಟರ್ ಪ್ರತಿಗಳ ಧೃಡೀಕೃತ ನಕಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ **ನಿ.ಡಿ.-29 ಮತ್ತು ನಿ.ಡಿ.-30** ಎಂದು, ಮರಣ ಪ್ರಮಾಣ ಪತ್ರದ ಧೃಡೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು **ನಿ.ಡಿ.-31** ಎಂದು ಮತ್ತು ಅಸಲು ದಾವೆ ಸಂಖ್ಯೆ 383/2022 ರಲ್ಲಿ ಡಿ.ಡಬ್ಲ್ಯೂ-1 ರ ಸಾಕ್ಷ್ಯದ ಧೃಡೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು **ನಿ.ಡಿ.-32** ಎಂದು ಗುರುತಿಸಲಾಯಿತು.

**ಪಾಟಿ ಸವಾಲು: ವಾದಿಗಳ ಪರ ವಕೀಲರು ಸಮಯಾವಕಾಶವನ್ನು ಕೋರಿದ್ದು, ಸಮಯಾವಕಾಶವನ್ನು ನೀಡಿ ಮುಂದೂಡಲಾಯಿತು.**

**(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸಾ ಸ ಇ ಒ.,**

**ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,**

**ಹೆಗ್ಗಡದೇವನಕೋಟೆ.**